# ನನ್ನನ್ನು ಸಭಾಪತಿ ಮಾಡಲು ಎಲ್ಲ ಪಕ್ಷಗಳ ಒಲವಿದೆ: ಹೊರಟ್ಟಿ

ಹುಬ್ಬಳ್ಳಿ: ವಿಧಾನಪರಿಷತ್ ಸಭಾಪತಿ ಸ್ಥಾನಕ್ಕೆ ನನ್ನನ್ನು ಆಯ್ಕೆ ಮಾಡಲು ಮೂರೂ ಪಕ್ಷಗಳಲ್ಲೂ ಒಲವಿದೆ ಎಂದು ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಹೇಳಿದರು. ಗುರುವಾರ ಸುದ್ದಿಗಾರರ ಜತೆಗೆ



ಮಾತನಾಡಿ, ಮೂರೂ ಪಕ್ಷದ ಮುಖಂಡರಲ್ಲಿ ಬಹುತೇಕರು ನನ್ನನ್ನೇ ಸಭಾಪತಿ ಮಾಡಲು ಆಸಕ್ತಿ ಹೊಂದಿದ್ದಾರೆ. ದೇವೇಗೌಡರೂ ಆಸಕ್ತಿ ತೋರಿದ್ದಾರೆ ಎಂಬುದು ಮಾಧ್ಯಮಗಳಿಂದ ಗೊತ್ತಾಗಿದೆ ಎಂದರು.

ಜೆಡಿಎಸ್‌ಗೆ ಸಭಾಪತಿ ಸ್ಥಾನ ಕೊಡಬೇಕು ಎಂಬ ನಿಯಮವೇನೂ ಇಲ್ಲ. ಆದರೆ ಜೆಡಿಎಸ್ ಬಿಟ್ಟು ಸಭಾಪತಿಯನ್ನು ಆಯ್ಕೆ ಮಾಡಲು ಸಾಧ್ಯವಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಹಿಂದೆ ನನ್ನ ಹೆಸರು ಪ್ರಸ್ತಾಪವಾದಾಗಲೂ ಎಲ್ಲ ಪಕ್ಷಗಳು ಸಹಮತ ವ್ಯಕ್ತಪಡಿಸಿದ್ದವು ಈಗಲೂ ಅದೇ ರೀತಿ ಸರ್ವಸಮ್ಮತಿ ತೋರಲಿವೆ ಎಂದರು.

# ಸಭಾಪತಿ ಆಗದಿದ್ದರೆ ದೇಶ ಮುಳುಗುತ್ತಾ: ಶಿವಲಿಂಗೇಗೌಡ ಪ್ರಶ್ನೆ

ಬೆಂಗಳೂರು: ಪಕ್ಷದ ನಾಯಕ ಬಸವರಾಜ ಹೊರಟ್ಟಿ ಅವರು ವಿಧಾನಪರಿಷತ್ತಿನ ಸಭಾಪತಿಯಾಗದಿದ್ದರೆ ದೇಶ ಮುಳುಗುತ್ತಾ ಎಂದು ಜೆಡಿಎಸ್‌ನ ಶಾಸಕ ಕೆ.ಎಂ.ಶಿವಲಿಂಗೇಗೌಡ ಖಾರವಾಗಿ ಪ್ರಶ್ನಿಸಿದ್ದಾರೆ.



ಗುರುವಾರ ನಡೆದ ಪಕ್ಷದ ಮುಖಂಡರ ಸಂಘಟನಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಅವರನ್ನು ಸುಮ್ಮನಿರಿಸಿದರೆ ಬಿಜೆಪಿ ಜತೆ ಸಖ್ಯ ಬೆಳೆಸಬಹುದು ಎಂಬ ಮಾತನ್ನು ಹೊರಟ್ಟಿ ಹೇಳುವ ಅಗತ್ಯ ಇರಲಿಲ್ಲ ಎಂದು ಹೇಳಿದರು.

ಯಾರದ್ದೋ ಸ್ವಾರ್ಥಕ್ಕಾಗಿ ಪಕ್ಷವನ್ನು ಬಲಿ ಕೊಡಬಾರದು. ಬಿಜೆಪಿ ಜತೆ ಸಖ್ಯ ಬೆಳೆಸುತ್ತೇವೆ ಎಂದು ಯಾಕೆ ಹೇಳಬೇಕಿತ್ತು? ಬಿಜೆಪಿ ಜತೆ ಸಂಬಂಧ ಬೆಳೆಸಬಹುದು ಎಂದು ಹೇಳಲು ಸ್ವಾತಂತ್ರ್ಯ ಕೊಟ್ಟವರು ಯಾರು ಎಂದು ಆಕ್ರೋಶ ವ್ಯಕ್ತಪಡಿಸಿದರು.